ನಿಮ್ಮೊಡನೆ

# ಅಗ್ಗದ ದರದಲ್ಲಿ ವೈದ್ಯಕೀಯ ಸೇವೆ?

ವೈದ್ಯಕೀಯ ಸೇವಾ ಕ್ಷೇತ್ರದಲ್ಲಿ ವಿಶ್ವದ ಮುಂದುವರಿದ ರಾಷ್ಟ್ರಗಳಲ್ಲಿ ಅತ್ಯಂತ ಮಹತ್ವದ ಸಂಶೋಧನೆಗಳು ನಡೆಯುತ್ತಿವೆ. ಹೊಸ, ಹೊಸ ಆವಿಷ್ಕಾರಗಳು ಆಗುತ್ತಿವೆ. ಅದರ ಫಲ ಇಡೀ ಮಾನವ ಜನಾಂಗಕ್ಕೆ ಸಿಕ್ಕಬೇಕು. ದುರದೃಷ್ಟದ ಸಂಗತಿ ಎಂದರೆ ಮೂರನೇ ವಿಶ್ವದ ರಾಷ್ಟ್ರಗಳ ಜನರಿಗೆ ಆರೋಗ್ಯ ಸೇವೆಗಳು ನಿರೀಕ್ಷಿಸಿದ ಪ್ರಮಾಣದಲ್ಲಿ ಸಿಗುತ್ತಿಲ್ಲ. ಸಿಕ್ಕರೂ ಅವನ್ನು ಪಡೆದುಕೊಳ್ಳುವ ಸಾಮರ್ಥ್ಯ ಜನಸಾಮಾನ್ಯರಿಗೆ ಇಲ್ಲ. ಇಂತಹ ಪ್ರತಿಕೂಲ ಪರಿಸ್ಥಿತಿಯಲ್ಲೂ ಕೆಲವು ಬಹುರಾಷ್ಟ್ರೀಯ ಕಂಪೆನಿಗಳು ಆರೋಗ್ಯ ಸೇವೆಗೆ ಸಂಬಂಧಿಸಿದ ಬಹುಮುಖ್ಯವಾದ ವೈದ್ಯಕೀಯ ಉಪಕರಣಗಳನ್ನು ಕಡಿಮೆ ವೆಚ್ಚದಲ್ಲಿ ತಯಾರಿಸುವ ಪ್ರಯತ್ನಗಳಿಗೆ ಕೈ ಹಾಕಿವೆ. ಮುಂದುವರಿದ ರಾಷ್ಟ್ರಗಳು ರೂಪಿಸಿದ ವೈದ್ಯಕೀಯ ತಂತ್ರಜ್ಞಾನವನ್ನು ಮೂರನೇ ವಿಶ್ವದ ರಾಷ್ಟ್ರಗಳ ಜನರಿಗೆ ಅಗ್ಗದ ದರದಲ್ಲಿ ನೀಡುವುದು ಈ ಕಂಪೆನಿಗಳ ಉದ್ದೇಶ ಎಂಬ ಮಾತುಗಳು ಕೇಳಿ ಬರುತ್ತಿವೆ. ಇದು ಅತ್ಯಂತ ಸ್ವಾಗತಾರ್ಹ ಬೆಳವಣಿಗೆ.

ಕರ್ನಾಟಕವೂ ಸೇರಿದಂತೆ ದೇಶದ ಉದ್ದಗಲದಲ್ಲಿರುವ ಜನ ಸಾಮಾನ್ಯರು, ಕೆಳ ಮಧ್ಯಮ ವರ್ಗದವರು ಹಾಗೂ ಗ್ರಾಮೀಣ ಪ್ರದೇಶದ ಜನರಿಗೆ ವೈದ್ಯಕೀಯ ಸೇವೆಗಳು ಇಂದಿಗೂ ದುಬಾರಿಯೇ. ದೇಶದಲ್ಲಿ ಅತ್ಯಾಧುನಿಕ ಆಸ್ಪತ್ರೆಗಳು ತಲೆ ಎತ್ತುತ್ತಿವೆ. ವೈದ್ಯಕೀಯ ಸೇವೆಗಳನ್ನು ಒದಗಿಸುವ ಪ್ರಯತ್ನದಲ್ಲಿ ಖಾಸಗಿ ವಲಯ ಸಾಕಷ್ಟು ಮುಂದಿದೆ. ವೈದ್ಯಕೀಯ ಕಾಲೇಜುಗಳ ಸಂಖ್ಯೆಯೂ ಹೆಚ್ಚಾಗಿವೆ. ದೇಶದಲ್ಲಿ ಅತ್ಯಂತ ಪ್ರತಿಭಾವಂತ ವೈದ್ಯರಿದ್ದಾರೆ. ವಿಶ್ವ ದರ್ಜೆಯ ಆಸ್ಪತ್ರೆಗಳಿವೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿವೆ. ಕೇಂದ್ರ ಸರ್ಕಾರ ರಾಷ್ಟ್ರೀಯ ಆರೋಗ್ಯ ಮಿಷನ್ ಮತ್ತು ವಿಮಾ ಯೋಜನೆ ಜಾರಿಗೆ ತಂದಿದೆ. ಇಷ್ಟಾದರೂ ಬಡವರಿಗೆ ಆರೋಗ್ಯ ಸೇವೆಗಳು ನಿರೀಕ್ಷಿಸಿದ ಪ್ರಮಾಣದಲ್ಲಿ ಸಿಗುತ್ತಿಲ್ಲ. ಖಾಸಗೀಕರಣಕ್ಕೆ ಉತ್ತೇಜನ ನೀಡುವ ಭರದಲ್ಲಿ ಸರ್ಕಾರಿ ವಲಯದ ಆಸ್ಪತ್ರೆಗಳನ್ನು ಉಪೇಕ್ಷಿಸಲಾಗಿದೆ. 'ಸರ್ಕಾರಿ ಆಸ್ಪತ್ರೆಗಳಲ್ಲಿ ಉತ್ತಮ ಸೇವಾ ಸೌಲಭ್ಯಗಳಿಲ್ಲ. ಅಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ' ಎಂಬ ಭಾವನೆ ಸಾರ್ವಜನಿಕರಲ್ಲಿ ವ್ಯಾಪಕವಾಗಿದೆ. ಹೀಗಾಗಿ ಖಾಸಗಿ ಆಸ್ಪತ್ರೆಗಳ ಮೇಲೆ ಅವಲಂಬನೆ ಹೆಚ್ಚುತ್ತಿದೆ.

ಒಂದೆರಡು ದಶಕಗಳ ಹಿಂದಿನ ಪರಿಸ್ಥಿತಿಗೆ ಹೋಲಿಸಿದರೆ ದೇಶದಲ್ಲಿ ಈಗ ಖಾಸಗಿ ಹಾಗೂ ಸರ್ಕಾರಿ ವಲಯಗಳಲ್ಲಿ ಆರೋಗ್ಯ ಸೇವಾ ಸೌಲಭ್ಯಗಳು ಹೆಚ್ಚಾಗಿದ್ದರೂ ಒಟ್ಟು ಜನಸಂಖ್ಯೆಗೆ ಹೋಲಿಸಿದರೆ ಈ ಸೌಲಭ್ಯಗಳು ಏನೇನೂ ಸಾಲದು. ಭಾರತದಲ್ಲಿ ಹೆಚ್ಚಿನ ಸಂಖ್ಯೆಯ ಸಾವುಗಳಿಗೆ ಹೃದಯ ರೋಗ ಕಾರಣವಾಗುತ್ತಿದೆ. ಹೃದಯ ರೋಗ ಪತ್ತೆ ಹಚ್ಚುವ ಪ್ರಾಥಮಿಕ ಹಂತದ ಪರೀಕ್ಷೆಗಳನ್ನು ಮಾಡಿಸಿಕೊಳ್ಳುವ ಮೊದಲೇ ಬಹಳಷ್ಟು ಜನರು ಸಾಯುತ್ತಾರೆ. ಹೃದಯರೋಗ ಒಂದೇ ಅಲ್ಲ ಕ್ಯಾನ್ಸರ್, ಏಡ್ಸ್, ಹೆಪಟೈಟಸ್- ಬಿ ಮತ್ತಿತರ ಮಾರಣಾಂತಿಕ ರೋಗಗಳಿಗೆ ಚಿಕಿತ್ಸೆ ಪಡೆಯುವುದು ಬಡ ಜನರಿಗೆ ಸಾಧ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಅತ್ಯಂತ ಕಡಿಮೆ ಬೆಲೆಯ ಇಸಿಜಿ, ಎಕ್ಸ್ ರೇ, ಅಲ್ಟ್ರಾಸೌಂಡ್ ಮತ್ತಿತರ ಯಂತ್ರಗಳನ್ನು ತಯಾರಿಸುವ ಪ್ರಯತ್ನಕ್ಕೆ ಬಹುರಾಷ್ಟ್ರೀಯ ಕಂಪೆನಿಗಳು ಮುಂದಾಗಿವೆ. ಹತ್ತು ರೂಪಾಯಿ ವೆಚ್ಚದಲ್ಲಿ ಇಸಿಜಿ (ಈಗ ಇಸಿಜಿಗೆ 250 ರೂ ತೆರಬೇಕಿದೆ) ಮಾಡಬಹುದಾದ ಅಗ್ಗದ  ಯಂತ್ರ ತಯಾರಿಸಲು ಬಹುರಾಷ್ಟ್ರೀಯ ಕಂಪೆನಿಯೊಂದು ಬೆಂಗಳೂರಿನಲ್ಲಿ ಕಾರ್ಯಪ್ರವೃತ್ತವಾಗಿದೆ. ದೇಶೀಯ ಉಪಕರಣಗಳನ್ನೇ ಬಳಸಿಕೊಂಡು ವೈದ್ಯಕೀಯ ಸೇವೆಯಲ್ಲಿ ಬಳಕೆಯಾಗುವ ಯಂತ್ರಗಳನ್ನು ತಯಾರಿಸುವುದು ಈ ಕಂಪೆನಿಗಳ ಉದ್ದೇಶ. ಇಂತಹ ಯಂತ್ರಗಳಿಂದ ಜನ ಸಾಮಾನ್ಯರಿಗೆ ಹೆಚ್ಚು ಪ್ರಯೋಜನವಾದೀತು.

ಸುಮಾರು ಒಂದು ಕಿಲೋ ತೂಕದ ಹಾಗೂ ಒಂದೆಡೆಯಿಂದ ಮತ್ತೊಂದೆಡೆಗೆ ಸುಲಭವಾಗಿ ಸಾಗಿಸಲು ಸಾಧ್ಯವಾಗುವಂತಹ ಇಸಿಜಿ ಯಂತ್ರಗಳನ್ನು ಗ್ರಾಮೀಣ ಪ್ರದೇಶಕ್ಕೆ ಕೊಂಡೊಯ್ದು ಬಳಸುವ ಸಾಧ್ಯತೆಯನ್ನು ಊಹಿಸಿಕೊಳ್ಳಿ. ಇಂತಹ ಯಂತ್ರಗಳು ಪ್ರತಿಯೊಂದು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇರಬೇಕು. ಬಹುರಾಷ್ಟ್ರೀಯ ಕಂಪೆನಿಗಳು ತಯಾರಿಸುವ ಕಡಿಮೆ ಬೆಲೆಯ ವೈದ್ಯಕೀಯ ಉಪಕರಣಗಳ ಪ್ರಯೋಜನ ಜನರಿಗೆ ಸಿಗಬೇಕು. ಇತ್ತೀಚಿನ ವರ್ಷಗಳಲ್ಲಿ ಆರೋಗ್ಯದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಪ್ರಯತ್ನಗಳು ಸಾಕಷ್ಟು ನಡೆಯುತ್ತಿವೆ. ಸರ್ಕಾರೇತರ ಸಂಸ್ಥೆಗಳು, ಸ್ವಯಂಸೇವಾ ಸಂಸ್ಥೆಗಳು, ಖಾಸಗಿ ಆರೋಗ್ಯ ಪ್ರತಿಷ್ಠಾನಗಳು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿವೆ.  ಆರೋಗ್ಯ ಸೇವಾ ಕ್ಷೇತ್ರ ಖಾಸಗಿಕರಣವಾಗುತ್ತ ಹೋದಂತೆ ಜನ ಸಾಮಾನ್ಯರು ಆರೋಗ್ಯ ಸೇವೆಯಿಂದ ವಂಚಿತರಾಗುತ್ತಾರೆ. ಅದಕ್ಕೆ ಸರ್ಕಾರ ಅವಕಾಶ ಕೊಡಬಾರದು.

■ ಪಿ.ಕೆ. ಹರಿಯಬ್ಬೆ

ಭಾರತದಲ್ಲಿ ಹೆಚ್ಚಿನ ಸಂಖ್ಯೆಯ ಸಾವುಗಳಿಗೆ ಹೃದಯ ರೋಗ ಕಾರಣವಾಗುತ್ತಿದೆ. ಹೃದಯ ರೋಗ ಪತ್ತೆ ಹಚ್ಚುವ ಪ್ರಾಥಮಿಕ ಹಂತದ ಪರೀಕ್ಷೆಗಳನ್ನು ಮಾಡಿಸಿಕೊಳ್ಳುವ ಮೊದಲೇ ಬಹಳಷ್ಟು ಜನರು ಸಾಯುತ್ತಾರೆ. ಹೃದಯರೋಗ ಒಂದೇ ಅಲ್ಲ ಕ್ಯಾನ್ಸರ್, ಏಡ್ಸ್, ಹೆಪಟೈಟಸ್- ಬಿ ಮತ್ತಿತರ ಮಾರಣಾಂತಿಕ ರೋಗಗಳಿಗೆ ಚಿಕಿತ್ಸೆ ಪಡೆಯುವುದು ಬಡ ಜನರಿಗೆ ಸಾಧ್ಯವಾಗುತ್ತಿಲ್ಲ.

